ಆ) ತೀರ್ಥಹಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಕಂಡು ಬಂದಿರುವ ನಕ್ಸಲ್ ಚಟುವಟಿಕೆಗಳನ್ನು ನಿಗ್ರಹಿಸಲು ಒಂದು ವಿಶೇಷ ದಳವನ್ನು ರಚನೆ ಮಾಡಿದ್ದು, ಅದರಲ್ಲಿ 1 ಸಿಪಿಐ, 1 ಪಿಎಸ್‌ಐ, 1 ಹೆಚ್‌ಸಿ, 18 ಪಿಸಿಗಳಿದ್ದು, ನಕ್ಸಲೈಟ್ ಆಪರೇಷನ್ ಬಗ್ಗೆ ಅವರುಗಳಿಗೆ ತರಬೇತಿ ನೀಡಲಾಗುತ್ತಿದೆ ಮತ್ತು ಈ ದಳವನ್ನು ತೀರ್ಥಹಳ್ಳಿ ತಾಲ್ಲೂಕಿನಲ್ಲಿ ನಕ್ಸಲ್ ಚಟುವಟಿಕೆ ಇರುವ ಗ್ರಾಮಗಳಲ್ಲಿ ಕಾರ್ಯಾಚರಣೆಗೆ ಉಪಯೋಗಿಸಲಾಗುತ್ತಿದೆ. ಸದರಿ ಗ್ರಾಮಗಳಲ್ಲಿ ಜನ ಸಂವೇದನೆ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳು ಹಾಗೂ ಇತರೆ ಇಲಾಖೆ ಮುಖ್ಯಸ್ಥರುಗಳೊಂದಿಗೆ ನಡೆಸಲಾಗುತ್ತಿದ್ದು, ಗ್ರಾಮಸ್ಥರಿಗೆ ಅತೀ ಮುಖ್ಯವಾದ ಸೌಲಭ್ಯಗಳಾದ ನೀರು, ವಿದ್ಯುತ್, ರಸ್ತೆ, ದೂರವಾಣಿ ಸಂಪರ್ಕ ಮುಂತಾದುವುದಗಳನ್ನು ಒದಗಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಕಂದಾಯ ಮತ್ತು ಅರಣ್ಯ ಸಿಬ್ಬಂದಿಯವರು ಸಹಾ ನಕ್ಸಲೀಯರ ಬಗ್ಗೆ ಮಾಹಿತಿ ಸಂಗ್ರಹಿಸಿ ಪೊಲೀಸ್ ಇಲಾಖೆಗೆ ಮಾಹಿತಿ ಒದಗಿಸುವಂತೆ ಸೂಚಿಸಲಾಗಿದೆ.

ಇ) ತೀರ್ಥಹಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಕಂಡು ಬಂದಿರುವ ನಕ್ಸಲ್ ಚಟುವಟಿಕೆಗಳನ್ನು ನಿಗ್ರಹಿಸಲು ಒಂದು ವಿಶೇಷ ದಳವನ್ನು ರಚನೆ ಮಾಡಿದ್ದು, ಅದರಲ್ಲಿ 1 ಸಿಪಿಐ, 1 ಪಿಎಸ್‌ಐ, 1 ಹೆಚ್‌ಸಿ, 18 ಪಿಸಿಗಳಿದ್ದು, ನಕ್ಸಲೈಟ್ ಆಪರೇಷನ್ ಬಗ್ಗೆ ಅವರುಗಳಿಗೆ ತರಬೇತಿ ನೀಡಲಾಗುತ್ತಿದೆ ಮತ್ತು ಈ ದಳವನ್ನು ತೀರ್ಥಹಳ್ಳಿ ತಾಲ್ಲೂಕಿನಲ್ಲಿ ನಕ್ಸಲ್ ಚಟುವಟಿಕೆ ಇರುವ ಗ್ರಾಮಗಳಲ್ಲಿ ಕಾರ್ಯಾಚರಣೆಗೆ ಉಪಯೋಗಿಸಲಾಗುತ್ತಿದೆ. ಸದರಿ ಗ್ರಾಮಗಳಲ್ಲಿ ಜನ ಸಂವೇದನೆ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳು ಹಾಗೂ ಇತರೆ ಇಲಾಖೆ ಮುಖ್ಯಸ್ಥರುಗಳೊಂದಿಗೆ ನಡೆಸಲಾಗುತ್ತಿದ್ದು, ಗ್ರಾಮಸ್ಥರಿಗೆ ಅತೀ ಮುಖ್ಯವಾದ ಸೌಲಭ್ಯಗಳಾದ ನೀರು, ವಿದ್ಯುತ್, ರಸ್ತೆ, ದೂರವಾಣಿ ಸಂಪರ್ಕ ಮುಂತಾದುವುಗಳನ್ನು ಒದಗಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಕಂದಾಯ ಮತ್ತು ಅರಣ್ಯ ಸಿಬ್ಬಂದಿಯವರು ಸಹಾ ನಕ್ಸಲೀಯರ ಬಗ್ಗೆ ಮಾಹಿತಿ ಸಂಗ್ರಹಿಸಿ ಪೊಲೀಸ್ ಇಲಾಖೆಗೆ ಮಾಹಿತಿ ಒದಗಿಸುವಂತೆ ಸೂಚಿಸಲಾಗಿದೆ.

ಈ) ಪರಿಶೀಲಿಸಲಾಗುವುದು.

ಉ) ಉದ್ಭವಿಸುವುದಿಲ್ಲ.

212 (635) : ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿಯ ಮಂಡಳಿಯ ವತಿಯಿಂದ ತೀರ್ಥಹಳ್ಳಿ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಇದೆಯೇ;

2) ಇದ್ದಲ್ಲಿ, ಸದರಿ ಯೋಜನೆಯ ಅಂದಾಜು ವೆಚ್ಚ ಎಷ್ಟು;

3) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

1) –ಇದೆ–

2) ರೂ. 189.05 ಲಕ್ಷಗಳು.

3) ಈ ಯೋಜನೆಯನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜಂಟಿ ನೆರವಿನಿಂದ ತೆಗೆದುಕೊಳ್ಳಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಅನುಮೋದನೆ ದೊರೆತ ನಂತರ ರಾಜ್ಯ ಸರ್ಕಾರದ ಅನುಮೋದನೆ ನೀಡಿ ಯೋಜನೆಯನ್ನು ಪ್ರಾರಂಭಿಸಲಾಗುವುದು.

213 (120) : ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ಬೆಂಗಳೂರು ಸುತ್ತಲಿನ 7 ನಗರಸಭೆಗಳಲ್ಲಿ ಅಭಿವೃದ್ಧಿ ಶುಲ್ಕವನ್ನು ಪಡೆಯಲು ಸರ್ಕಾರ ತಡೆ ನೀಡಲು ಕಾರಣವೇನು;

2) ತಡೆ ಹಿಡಿದಿರುವುದರಿಂದ ಕಾಮಗಾರಿಗಳು ಕುಂಠಿತವಾಗಿ ಕುಡಿಯುವ ನೀರು ಮತ್ತು ನೈರ್ಮಲೀಕರಣ ಕಾರ್ಯಗಳಿಗೆ ಹಣವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

3) ಅಭಿವೃದ್ಧಿ ಶುಲ್ಕ ಪಡೆಯಲು ಸರ್ಕಾರದಿಂದ ಯಾವಾಗ ಅನುಮತಿ ನೀಡಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

1) ಕರ್ನಾಟಕ ಪುರಸಭೆ ಕಾಯ್ದೆ 1964 ರಡಿಯಲ್ಲಿ ನಗರಸಭೆ ಅಥವಾ ಪುರಸಭೆಗಳಿಗೆ ಅಭಿವೃದ್ಧಿ ಶುಲ್ಕವನ್ನು ವಿಧಿಸುವ ಅವಕಾಶವಿಲ್ಲದಿರುವುದರಿಂದ ಬೆಂಗಳೂರಿನ 7 ನಗರಸಭೆಗಳಲ್ಲಿ ಸದರಿ ಶುಲ್ಕ ವಸೂಲಿ ಮಡುವುದನ್ನು ನಿಷೇಧಿಸಲಾಗಿದೆ.

2) ಇಲ್ಲ.

3) ಉದ್ಭವಿಸುವುದಿಲ್ಲ.

214 (124) : ಶ್ರೀ ಅಶೋಕ್ ಆರ್. (ಉತ್ತರಹಳ್ಳಿ), ಶ್ರೀ ಪಿ.ಸಿ. ಮೋಹನ್ (ಚಿಕ್ಕಪೇಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಪ್ರತಿದಿನ ಸಂಚರಿಸುವ ವಾಹನಗಳ ಅಂದಾಜು ಸಂಖ್ಯೆ ಎಷ್ಟು;

ಆ) ವಾಹನ ಸಂಚಾರವನ್ನು ಸುಗಮ ಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು

ಇ) ನಗರದಲ್ಲಿ ಏಕಮುಖ ವಾಹನ ಸಂಚಾರದ ವ್ಯವಸ್ಥೆಯನ್ನು ಮಾಡಲಾಗಿರುವ ರಸ್ತೆಗಳಾವುವು;

ಈ) ರಿಚ್ಮಂಡ್ ಸರ್ಕಲ್ ಹಾಗೂ ರೆಸಿಡೆನ್ಸಿ ರಸ್ತೆಗಳಲ್ಲಿ ಏಕಮುಖ ಸಂಚಾರ ವ್ಯವಸ್ಥೆಯಿಂದ ಪ್ರಯಾಣಿಕರಿಂದ ಹಾಗೂ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಊ) ಸದರಿ ಸಂಚಾರದ ವ್ಯವಸ್ಥೆಯಿಂದ ಹೆಚ್ಚು ಅಪಘಾತಗಳಾಗುತ್ತಿದ್ದು, ಇದನ್ನು ತಪ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;